# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-189 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 21.01.2023 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ-21-01-2023 ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ದಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರ ಅನುಪಸ್ಥಿತಿಯಲ್ಲಿದ್ದರಿಂದ ಶ್ರೀ ಸತೀಶ್.ಡಿ ಕಾರ್ಯದರ್ಶಿ ರವರು ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಮೊದಲಿಗೆ ಸಭೆಗೆ ಹಾಜರಿದ್ದ ಎಲ್ಲಾ ಇಲಾಖೆಯ ಅಧಿಕಾರಿಗಳು/ಸಿಬ್ಬಂದಿವರ್ಗ ಮತ್ತು ವಾರ್ಡ್ ಸದಸ್ಯರನ್ನು ಪರಿಚಯ ಮಾಡುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರಮ .ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| ೦೧ | ಶ್ರೀ.ಸತೀಶ್.ಡಿ ಸಹಾಯಕ ಅಭಿಯಂತರರು ವಾರ್ಡ್152 ಎಸ್.ಜಿ.ಪಾಳ್ಯ | 9480688152 |
| ೦೨ | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 9632222304 |
| ೦೩ | ಶ್ರೀ. ಮಲ್ಲಿಕಾರ್ಜುನ್ ಬಿರಾದರ ಹಿರಿಯ ಆರೋಗ್ಯ ಪರಿವೀಕ್ಷಕರು | 9945042307 |
| ೦೪ | ಶ್ರೀ.ಸುರೇಶ್ ಎ.ಎಸ್.ಐ ಎಸ್.ಜಿ.ಪೋಲಿಸ್ ಠಾಣೆ | 8123010522 |
| ೦೫ | ಶ್ರೀ.ಯಶವಂತ ಮಾರ್ಷ್‌ಲ್ | 9972601205 |
| ೦೬ | ಶ್ರೀ.ಡಾ॥ ಗೌತಮ್ ಪ್ರಕಾಶ್ ಹೆಚ್ ಮೆಡಿಕಲ್ ಆಫಿಸರ್ | 9986000094 |
| ೦೭ | ಶ್ರೀ.ಮುನಿಂದ್ರ ಮೇಲ್ವಿಚಾರಕರು ಫ.ತ್ಯಾನಿ | 9901002067 |
| ೦೮ | ಶ್ರೀ ಕೃಷ್ಣಸಿ ಕೆಲಸ ಪರಿವೀಕ್ಷಕರು ಬೆಂಗಳೂರು ನೀರು ಸರಬರಾಜು | 9845768405 |
| ೦೯ | ಶ್ರೀ.ಗಂಗಾದ್ರೀ ಮೇಲ್ವಿಚಾರಕರು ಫ.ತ್ಯಾನಿ | 9980225272 |
| ೧೦ | ಶ್ರೀ.ಎನ್.ಲೋಕೇಶ್ ಸದಸ್ಯರು | 9448579144 |
| ೧೧ | ಶ್ರೀಮತಿ.ಭೂದೇವಿ ಕೆಲಸ ಪರಿವೀಕ್ಷರು ತೋಟಗಾರಿಕೆ ಇಲಾಖೆ | 9740903427 |
| ೧೨ | ಶ್ರೀ.ವೀರುಪಾಕ್ಷಿ.ವಿ. ಎ.ಎಸ್.ಐ ಮಡಿವಾಳ ಪೊಲೀಸ್ ಠಾಣೆ | 8310086006 |
| ೧೩ | ಶ್ರೀ ಯಶವಂತ.ಎನ್ ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ | 9611918180 |
| ೧೪ | ಶ್ರೀ.ಬಿ.ಟಿ.ಕೃಷ್ಣಮುರ್ತಿ ಸದಸ್ಯರು | 9902552550 |
| ೧೫ | ಶ್ರೀ.ಸೈಯದ್ ನಜರುದ್ದೀನ್ | 9741518897 |

1) ಸಭೆಯನ್ನು ಪ್ರಾರಂಭಿಸುತ್ತಾ, ಸಭೆಗೆ ಹಾಜರಿದ್ದ ಸಂಚಾರಿ ಪೊಲೀಸ್ ಅಧಿಕಾರಿಗಳು ಮಾತನಾಡುತ್ತಾ, ಹಾಲಿ ಕ್ರೈಸ್ಟ್ ಕಾಲೇಜು ಹತ್ತಿರ ಟ್ರಾಫಿಕ್ ಸಮಸ್ಯೆ ಪ್ರತಿಶತ 80% ಕಡಿಮೆಯಾಗಿರುವುದು ಹರ್ಷ ವ್ಯಕ್ತಪಡಿಸುತ್ತಾ, ಇದಕ್ಕೆ ಸಹಕರಿಸಿದವರೆಗೆ ಅಭಿನಂದನೆಗಳನ್ನು ವ್ಯಕ್ತಪಡಿಸುತ್ತಾ, ಇದೆ ರೀತಿ ಸಹಕಾರ ನೀಡಲು ಸಭೆಗೆ ತಿಳಿಸಿದರು.

2) ಇದೆ ರೀತಿ ಸಂಚಾರಿ ಪೊಲೀಸ್ ಅಧಿಕಾರಿಗಳು ಮತನಾಡುತ್ತಾ, ಹೊಸ ಆದೇಶದ ಪ್ರಕಾರ, ಬೆಂಗಳೂರು ನಗರ ಪ್ರದೇಶದಲ್ಲಿ ವೈಟ್ ಬೋರ್ಡ್ ಟ್ರಾಕ್ಟರ್‌ಗಳನ್ನು ವಾಣಿಜ್ಯ ಚಟುವಟಿಕೆಗಳಿಗೆ ಒಡಾಡಿಸುವುದು ನಿರ್ಭಂಧಿಸಲಾಗಿದೆ. ವಾಣಿಜ್ಯ ಚಟುವಟಿಕೆಗಳಿಗೆ ಹಳದಿ ಬಣ್ಣದ ಬೋರ್ಡ್ ಹೊಂದಿದ ಟ್ರಾಕ್ಟರ್‌ಗಳಿಗೆ ಮಾತ್ರ ಒಡಾಡಿಸಬಹುದು ಮತ್ತು ನಿರ್ಬಂಧಿತ ಸಮಯದಲ್ಲಿ ಟ್ರಾಕ್ಟರ್‌ಗಳನ್ನು ಒಡಾಡಿಸಲು ಸಾಧ್ಯವಿರುವುದಿಲ್ಲ ಬೆಳಿಗ್ಗೆ 11:00 ಮೇಲೆ ವಾಹನಗಳನ್ನು ಒಡಾಡಿಸಬಹುದು ಎಂದು ಸಭೆಗೆ ತಿಳಿಸಿದರು.

3) ಶ್ರೀ ಡಾ॥ ಗೌತಮ್ ಪ್ರಕಾಶ್ ಮೇಡಿಲ್ ಹೆಲ್ತ್ ಆಫಿಸರ್ಸ್ ಮಾತನಾಡಿ, ಕೊವೀಡ್-19ಗೆ ಸಂಬಂಧಿಸಿದಂತೆ, 18 ವರ್ಷದ ಮೇಲ್ಪಟ್ಟ ಎಲ್ಲರಿಗೂ ಕೋ-ವ್ಯಾಕ್ಸಿನ್ ಮತ್ತು ಕೋವಿ ಸಿಲ್ಡ್ ಬೂಸ್ಟರ್ ಡೋಸ್ ಲಭ್ಯವಿದ್ದು, ಇದರ ಪ್ರಯೋಜನ ಪಡೆಯಲು ನಾಗರೀಕರಿಗೆ ಮತ್ತು ಯುವಜನರಿಗೆ ತಿಳಿಹೇಳಲು ವಾರ್ಡ್ ಸದಸ್ಯರಿಗೆ ತಿಳಿಸಿದರು.

4) ಸಭೆಗೆ ಹಾಜರಿದ್ದ, ಶ್ರೀ ಬಿ.ಟಿ.ಕೃಷ್ಣಮೂರ್ತಿರವರು ಮಾತನಾಡಿ, ತಾವರೆಕೆರೆ ಮುಖ್ಯರಸ್ತೆಯಲ್ಲಿನ ಮ್ಯಾನ್‌ಹೋಲ್‌ಗಳು ರಸ್ತೆ ಮಟ್ಟಕ್ಕಿಂತ ಇಳಿದು ರಸ್ತೆಗುಂಡಿಗಳಾಗಿ ಪರಿವರ್ತನೆಗೊಂಡು ವಾಹನ ಸಂಚಾರರಿಗೆ ತುಂಬ ತೊಂದರೆಯಾಗುತ್ತಿರುತ್ತದೆ. ಈ ಬಗ್ಗೆ ಈ ಹಿಂದೆ ಹಲವಾರು ಬಾರಿ ಕ್ರಮವಹಿಸಲು ಸೂಚಿಸಲಾಗಿತ್ತು. ಆದರೆ ಇದುವರೆಗೂ ಯಾವುದೇ ಕ್ರಮವಹಿಸಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ

ಕೂಡಲೇ ಪ್ರಸ್ತಾಪಿತ ವಿಷಯದ ಬಗ್ಗೆ ಅತಿ ಗಂಭೀರವಾಗಿ ಪರಿಗಣಿಸಿ ಕ್ರಮವಹಿಸಲು ಸೂಚಿಸುತ್ತಾ, ಮುಂದಿನ ಸಭೆಗೆ ವರದಿಯನ್ನು ಸಲ್ಲಿಸಲು ಸೂಚಿಸಿದರು.

5) ಅದೇ ರೀತಿ ಸಭೆಗೆ ಹಾಜರಿದ್ದ, ಟ್ರಾಫಿಕ್ ಸಂಚಾರಿ ಪೋಲೀಸ್ ಅಧಿಕಾರಿಗಳು ಮಾತನಾಡುತ್ತಾ, ತಾವರಕೆರೆ ಮುಖ್ಯರಸ್ತೆಯಲ್ಲಿನ ನೆಕ್ಸಾನ್ ಷೋರುಂ ಹತ್ತಿರ ಕುಡಿಯುವ ನೀರು ಸೋರಿಕೆಯಾಗಿ ಗುಂಡಿಗಳಾಗಿರುವುದು ಕಂಡುಬಂದಿದೆ. ಈ ಬಗ್ಗೆ ಕ್ರಮವಹಿಸಲು ಸಭೆಗೆ ತಿಳಿಸಿದರು. ಈ ಬಗ್ಗೆ ಸಭಾಧ್ಯಕ್ಷರು ವಾರ್ಡ್ ಅಭಿಯಂತರರನ್ನು ಉದ್ದೇಶಿಸಿ ಮಾತನಾಡಿ, ಪ್ರಸ್ತಾಪಿತ ಸ್ಥಳವನ್ನು ಪರಿಶೀಲಿಸಿ, ಸಂಬಂಧಪಟ್ಟ ಇಲಾಖೆಯಿಂದ ಕೂಡಲೇ ಕ್ರಮವಹಿಸಲು ಸೂಚಿಸಿದರು.

6) ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪ್ರಸ್ತಾಪಿಸಲಾಗಿ, ಶ್ರೀ ಅಜಯ್ ಕಿರಿಯ ಆರೋಗ್ಯ ಪರಿವೀಕ್ಷರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಒಣತ್ಯಾಜ್ಯ ಮತ್ತು ಹಸಿ ತ್ಯಾಜ್ಯ ಸಮರ್ಪಕವಾಗಿ ಸಂಗ್ರಹಿಸಿ ವಿಲೇವಾರಿ ಮಾಡಲಾಗುತ್ತಿರುತ್ತದೆ ಮತ್ತು ಬ್ಲಾಕ್ ಸ್ಪಾಟ್‌ಗಳ ಸಂಖ್ಯೆಗಳು ಆದಷ್ಟು ಕಡಿತಗೊಳಿಸಲು ಕ್ರಮವಹಿಸಲಾಗುತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಸಭೆ ಅಧ್ಯಕ್ಷರು ಮಾತನಾಡಿ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

(ಶ್ರೀ. ಅಶೋಕ್.ಎಸ್.ಬಿರಾದಾರ)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

ಪ್ರತಿಯನ್ನು:
1. ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ-ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.